ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಸಬ್ ಜಡ್ಜ್‌ರೀಯವರ ಕೋರ್ಟಿನಲ್ಲಿ—

1884ನೇ ಇಸವಿ ಅರ್ಜೀ ನಂಬರ್ 99.

ಮೃತಪಟ್ಟ ತಿಮ್ಮದಾಸಪ್ಪನವರ ಆಸ್ತಿ ವಿಷಯದಲ್ಲಿ—

ಅರ್ಜಿದಾರು) ಚಲವಯ್ಯ, ಮೃತಪಟ್ಟ ಸದರೀ ತಿಮ್ಮದಾಸಪ್ಪನವರಿಗೆ ತಮ್ಮನು ಆಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ತಾಲೂಕು ರಾಣಿಂಗನಪೇಟೆ ಸ್ಥಳದ ಚಲವಯ್ಯನವರು, ಡಿಟೋ ವಾಸಸ್ಥರಾಗಿ ಮೃತಪಟ್ಟ ತಿಮ್ಮದಾಸಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಚಲವಯ್ಯನವರ ಅರ್ಜೀಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 14ರಲ್ಲು ಕೈಗೆ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆಕಾಲದಲ್ಲಿ ಸದರೀ ಮೃತಪಟ್ಟ ತಿಮ್ಮದಾಸಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಸ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

ಸ್ಯ 1884ನೇ ಇಸವಿ ಅರ್ಜೀ ನಂಬರ್ 102.

ಮೃತಪಟ್ಟ ಪಟ್ಟಾಭಿಭಟ್ಟರ ಆಸ್ತಿ ವಿಷಯದಲ್ಲಿ—

ಅರ್ಜೀದಾರು) ನರಸುಬ್ಬಶಾಸ್ತ್ರಿ, ಮೃತಪಟ್ಟ ಸದರೀ ಪಟ್ಟಾಭಿ ಭಟ್ಟರಿಗೆ ತಾತ ಸಹೋದರ ತಮ್ಮನು ಆಗಬೇಕೆಂಬ ಹಕ್ಕುದಾರೀ ಮೇಲೆ ಗುಬ್ಬೀ ತಾಲ್ಲೂಕು ಚಿಟ್ಟನಹಳ್ಳಿ ಸ್ಥಳದ ನರಸುಬ್ಬಶಾಸ್ತ್ರಿ) ಯೆಂಬವರು, ಗೋರಿಬಿದನೂರು ತಾಲ್ಲೂಕು ಹುದಗನೂರು ವಾಸಸ್ಥರಾಗಿ ಮೃತಪಟ್ಟ ಪಟ್ಟಾಭಿ ಭಟ್ಟರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ನರಸುಬ್ಬಶಾಸ್ತ್ರಿಯರ ಅರ್ಜೀಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 14ರಲ್ಲು ಕೈಗೆ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಪಟ್ಟಾಭಿ ಭಟ್ಟರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1884ನೇ ಇಸವಿ ಅರ್ಜೀ ನಂಬರ್ 107.

ಮೃತಪಟ್ಟ ಚಿಕ್ಕ ಸಂಪಯ್ಯನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರು) ಬಂದಮ್ಮ, ಮೃತಪಟ್ಟ ಸದರೀ ಚಿಕ್ಕ ಸಂಪಯ್ಯನವರಿಗೆ ಮಗಳು ಆಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ತಾಲ್ಲೂಕು ಕಬ್ಬರ್ಪೇಟೆ ಸ್ಥಳದ ಬಂದಮ್ಮನವರು, ಡಿಟೋ ವಾಸಸ್ಥರಾಗಿ ಮೃತಪಟ್ಟ ಚಿಕ್ಕ ಸಂಪಯ್ಯನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಬಂದಮ್ಮನ ಅರ್ಜೀಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 14ರಲ್ಲು ಕೈಗೆ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಚಿಕ್ಕ ಸಂಪಯ್ಯನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1884ನೇ ಇಸವಿ ಜುಲೈ ತಿಂಗಳು 17ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

1884ನೇ ಇಸವಿ ಅರ್ಜೀ ನಂಬರ್ 108.

ಮೃತಪಟ್ಟ ನಗರ್ತರ ಜವಳೀ ನಂಜುಂಡಪ್ಪನ ಆಸ್ತಿ ವಿಷಯದಲ್ಲಿ—

ಅರ್ಜೀದಾರು) ಸಿದ್ದಪ್ಪ, ಮೃತಪಟ್ಟ ಸದರೀ ನಂಜುಂಡಪ್ಪನವರಿಗೆ ಪಾಲಕ ಪುತ್ರನು ಆಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ತಾಲ್ಲೂಕು ಬೇಗೂರು ಹೋಬಳಿ ಬಾಡತೋಗೂರಿನ ಸ್ಥಳದ ಸಿದ್ದಪ್ಪನವರು ಡಿಟೋ ಗ್ರಾಮದ ವಾಸಸ್ಥರಾಗಿ ಮೃತಪಟ್ಟ ನಂಜುಂಡಪ್ಪನವ

ಜಿಂದಗಿ ಬಗ್ಯಾಗಿ ಬಗತಕ್ಕ ಸೂಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಸಿದ್ದಪ್ಪನವರ ಅರ್ಜೀಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 14ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಂಜುಂಡಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಜುಲೈ ತಿಂಗಳು 21ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸಿ. ಕ್ರೀಸ್,
ಸಬ ಜಡ್ಜ.

ಬೆಂಗಳೂರು ಡಿಸ್ಟ್ರಿಕ್ಟು.

ತಾರೀಖು 1ನೇ ಜುಲೈ 1884.

ಬೆಂಗಳೂರಲ್ಲಿರತಕ್ಕ ಮೈಸೂರು ಗವರ್ಮೆಂಟ್ ಸೇವಿಂಗ್ಸ್ ಬ್ಯಾಂಕಿನ ಡಿಪಾಜಿಟ್‌ದಾರ್ರಿಗೆ ಕೇಳಿ ಕೊಳ್ಳುವದೇನಂದರೆ, 1884ನೇ ಇಸವಿ ಮಾರ್ಚಿ 31ನೇ ಮತ್ತುಂ ವರಿಗಿನ ಬಡ್ಡಿಯನ್ನು ಫೈಸಲ್ಮಾಡುವ ಬಗ್ಯಾಗಿ ಅವರವರ ಪ್ಯಾಸ್ ಬುಕ್ಕುಗಳನ್ನು ಬೆಂಗಳೂರು ಡಿಸ್ಟ್ರಿಕ್ಟು ಟ್ರೆಜರೀಯಲ್ಲಿ ಹಾಜರ್ಮಾಡತಕ್ಕದ್ದು.

ಎ. ರಂಗಸ್ವಾಮಯ್ಯಂಗಾರ್,
ಫಾರ್ ಟ್ರೆಜರಿ ಆಫೀಸರ್.

ಮೈಸೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು ಜಡ್ಜ್‌ರೀಯವರ ಕೋರ್ಟಿನಲ್ಲಿ

1884ನೇ ಇಸವಿ ಅರ್ಜೀ ನಂಬರ್ 230.

ಮೃತಪಟ್ಟ ನಂಜಪ್ಪನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಗರಳಪುರಯ್ಯ, ಮೃತಪಟ್ಟ ಸದರೀ ನಂಜಪ್ಪನಿಗೆ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ನಂಜನಗೂಡು ತಾಲ್ಲೂಕು ಕಿಬೂರು ಸ್ಥಳದ ಸದರೀ ಗರಳಪುರಯ್ಯನು, ಸದರೀ ವಾಸಸ್ಥರಾಗಿ ಮೃತಪಟ್ಟ ನಂಜಪ್ಪನ ಜಿಂದಗಿ ಬಗ್ಯಾಗಿ ಬರತಕ್ಕ 75 ರೂಪಾಯಿಗ ಸೂಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡುತ್ತಾನೆ.

ಸದರೀ ದರಖಾಸ್ತುದಾರನಾದ ಗರಳಪುರಯ್ಯನ ಅರ್ಜಿಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 19ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಂಜಪ್ಪನ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಅರ್ಜೀ ನಂಬರ್ 233.

ಮೃತಪಟ್ಟ ಸೈದ್‌ಬುರ್ಹ ಸಾಬಿ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಸೈದ್ ಅಹಮ್ಮದ್‌ಸಾಬಿ, ಮೃತಪಟ್ಟ ಸದರೀ ಸೈದ್ ಬುರ್ಹಸಾಬಿಗೆ ಅಂಣಾನಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಹೆಜತೊರೆ ತಾಲ್ಲೂಕು ಸಾಲಿಗ್ರಾಮ ಸ್ಥಳದ ಸದರೀ ಸೈದ್ ಅಹಮ್ಮದ್ ಸಾಬಿಯು, ಸದರೀ ವಾಸಸ್ಥನಾಗಿ ಮೃತಪಟ್ಟ ಸೈದ್ ಬುರ್ಹಸಾಬಿ ಜಿಂದಗಿ ಬಗ್ಯಾಗಿ ಬರತಕ್ಕ 395 ರೂಪಾಯಿಗಳ ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.